# ಕುವೆಂಪು ವಿಶ್ವವಿದ್ಯಾಲಯ

**ದಿನಾಂಕ:05–05–2026 ರಂದು ಮಂಗಳವಾರ "ಶತಮಾನೋತ್ಸವ ಭವನದ ಹೊಸ ಸಿಂಡಿಕೇಟ್ ಸಭಾಂಗಣ" ಇಲ್ಲಿ ನಡೆದ 403ನೇ "ಸಿಂಡಿಕೇಟ್ ಅಸಾಮಾನ್ಯ (ಘಟಿಕೋತ್ಸವ) ಸಭೆ"ಯ ನಡಾವಳಿಗಳು.**

**ಹಾಜರಾದ ಸದಸ್ಯರು:**

| | | |
|---|---|---|
| 1. | ಪ್ರೊ. ಶರತ್ ಅನಂತಮೂರ್ತಿ, ಕುಲಪತಿಗಳು | ಅಧ್ಯಕ್ಷರು |
| 2. | ಶ್ರೀ ಹೇಮಂತ್ ಎನ್. ಐ.ಎ.ಎಸ್. ಕುಲಸಚಿವರು | ಸದಸ್ಯ ಕಾರ್ಯದರ್ಶಿಗಳು |
| 3. | ಪ್ರೊ. ಆರ್. ತಿಮ್ಮರಾಯಪ್ಪ, ಕುಲಸಚಿವರು (ಮೌಲ್ಯಮಾಪನ) | ಸದಸ್ಯರು |
| 4. | ಡಾ. ಕೇಶವ ಹೆಚ್. ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರ ಪ್ರತಿನಿಧಿ | ಸದಸ್ಯರು |
| 5. | ಪ್ರೊ. ಚಂದ್ರಶೇಖರ್ ಎಸ್., ಡೀನರು, ಕಲಾ ನಿಕಾಯ | ಸದಸ್ಯರು |
| 6. | ಶ್ರೀ ಶಾಂತಕುಮಾರ್ ಜಿ.ಎಸ್. | ಸದಸ್ಯರು |
| 7. | ಶ್ರೀ ಶಶಿಧರ್ ಬಿ.ಎನ್. | ಸದಸ್ಯರು |
| 8. | ಡಾ. ಚಿದಾನಂದ ಎನ್.ಕೆ. ಪ್ರಾಂಶುಪಾಲರು | ಸದಸ್ಯರು |
| 9. | ಡಾ. ಎಂ. ವೆಂಕಟೇಶ್. ಪ್ರಾಂಶುಪಾಲರು | ಸದಸ್ಯರು |
| 10. | ಡಾ. ಪ್ರಭಾಕರ್ ಎಸ್. ಮಂಟೂರೆ, ಪ್ರಾಂಶುಪಾಲರು | ಸದಸ್ಯರು |
| 11. | ಡಾ. ಪ್ರತಿಭಾ ಕೆ.ಆರ್. ಪ್ರಾಂಶುಪಾಲರು | ಸದಸ್ಯರು |
| 12. | ಶ್ರೀ ಶಿವಕುಮಾರ್ ಎಂ. | ಸದಸ್ಯರು |
| 13. | ಶ್ರೀ ಲಕ್ಷ್ಮಿಕಾಂತ ಚಿಮನೂರು | ಸದಸ್ಯರು |
| 14. | ಪ್ರೊ. ಸಾಕಮ್ಮ ಬಿ. | ಸದಸ್ಯರು |
| 15. | ಶ್ರೀ ಮುಸಾವೀರ್ ಬಾಷಾ ಎಂ. | ಸದಸ್ಯರು |
| 16. | ಶ್ರೀ. ಕೆ.ಪಿ. ಶ್ರೀಪಾಲ್ | ಸದಸ್ಯರು |
| 17. | ಶ್ರೀ ಹೆಚ್.ಜಿ. ಅರವಿಂದ | ಸದಸ್ಯರು |

**ಗೈರು ಹಾಜರಾದ ಸದಸ್ಯರು:**

| | | |
|---|---|---|
| 1. | ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು. | ಸದಸ್ಯರು |
| 2. | ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು. | ಸದಸ್ಯರು |
| 3. | ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು. | ಸದಸ್ಯರು |
| 4. | ಆಯುಕ್ತರು, ಸಾರ್ವಜನಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು. | ಸದಸ್ಯರು |

**ಪ್ರಸ್ತಾವನೆ:** ಪ್ರಾರಂಭದಲ್ಲಿ ಸಭೆಗೆ ಆಗಮಿಸಿದ ಸದಸ್ಯರುಗಳೆಲ್ಲರಿಗೂ ಮಾನ್ಯ ಕುಲಸಚಿವರು ಆತ್ಮೀಯವಾಗಿ ಸ್ವಾಗತ ಕೋರಿದರು.

ಮಾನ್ಯ ಕುಲಪತಿಯವರು ಪ್ರಾಸ್ತಾವಿಕವಾಗಿ ಮಾತನಾಡುತ್ತಾ, ಘನತೆವೆತ್ತ ಕುಲಾಧಿಪತಿಗಳ ಅನುಮೋದನೆ ಮೇರೆಗೆ ವಿಶ್ವವಿದ್ಯಾಲಯದ 35ನೇ ವಾರ್ಷಿಕ ಘಟಿಕೋತ್ಸವವನ್ನು ದಿನಾಂಕ:06–05–2026 ರಂದು ಏರ್ಪಡಿಸಲಾಗಿರುತ್ತದೆ. ವಿಶ್ವವಿದ್ಯಾಲಯದ ಕುಲಾಧಿಪತಿಗಳು ಹಾಗೂ ಸನ್ಮಾನ್ಯ ರಾಜ್ಯಪಾಲರಾಗಿರುವ ಶ್ರೀ ಥಾವರ್‌ಚಂದ್ ಗೆಹ್ಲೋಟ್‌ರವರು ಅಗ್ರಾಸನ ವಹಿಸಲಿದ್ದು, ಘನತೆವೆತ್ತ ಉನ್ನತ ಶಿಕ್ಷಣ ಸಚಿವರೂ ಹಾಗೂ ವಿಶ್ವವಿದ್ಯಾಲಯದ ಸಮಕುಲಾಧಿಪತಿಗಳಾದ ಡಾ.ಎಂ.ಸಿ.ಸುಧಾಕರ್‌ರವರು ಉಪಸ್ಥಿತರಿರುವರು. ಪ್ರೊ.ಅನಿಲ್.ಡಿ. ಸಹಸ್ರಬುಧೆ, ಅಧ್ಯಕ್ಷರು, ರಾಷ್ಟ್ರೀಯ ಶೈಕ್ಷಣಿಕ ತಂತ್ರಜ್ಞಾನ ಫೋರಮ್ ಮತ್ತು ಅಧ್ಯಕ್ಷರು, ರಾಷ್ಟ್ರೀಯ ಮಾನ್ಯತಾ ಮಂಡಳಿ, ಶಿಕ್ಷಣ ಸಚಿವಾಲಯ, ಭಾರತ ಸರ್ಕಾರ ಇವರು ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಘಟಿಕೋತ್ಸವ ಭಾಷಣ ಮಾಡಲಿದ್ದಾರೆ. ಹಾಗೂ ಶ್ರೀ.ಕೋಣಂದೂರು ಲಿಂಗಪ್ಪ, ಶ್ರೀಕೆ.ವಿ.ಅಕ್ಷರ ಮತ್ತು

ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನಸಹ್ಯಾದ್ರಿ
ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ.

ಪ್ರೊ.ಹೆಚ್.ಎ.ರಂಗನಾಥ್ ಇವರುಗಳಿಗೆ ಗೌರವ ಡಾಕ್ಟರೇಟ್ ಪದವಿಯನ್ನು ಪ್ರದಾನ ಮಾಡಲಾಗುವುದು. ಘಟಿಕೋತ್ಸವದಲ್ಲಿ ಪಿಹೆಚ್.ಡಿ., ಸ್ನಾತಕೋತ್ತರ ಮತ್ತು ಸ್ನಾತಕ ಪದವಿ ಪಡೆಯುವ ಅಭ್ಯರ್ಥಿಗಳ ಪಟ್ಟಿಯನ್ನು ಪರಿಶೀಲಿಸಿ ಅನುಮೋದಿಸಲು ಇಂದಿನ ಸಿಂಡಿಕೇಟ್ ಅಸಾಮಾನ್ಯ ಸಭೆಯನ್ನು ಕರೆಯಲಾಗಿದ್ದು, ಎಲ್ಲಾ ಸದಸ್ಯರುಗಳು ಸಭೆಯನ್ನು ಹಾಗೂ ಘಟಿಕೋತ್ಸವ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿಕೊಡುವಂತೆ ಕೋರಿದರು.

**ಪರೀಕ್ಷಾ ವಿಭಾಗ**

**2026–ಸಿಂ–5.01:** 35ನೇ ವಾರ್ಷಿಕ ಘಟಿಕೋತ್ಸವದಲ್ಲಿ ಪದವಿ ಪಡೆಯುವ ಅರ್ಹ ಅಭ್ಯರ್ಥಿಗಳ ಪಟ್ಟಿ ಅನುಮೋದಿಸುವ ಬಗ್ಗೆ.

**ಚರ್ಚೆ:** ಕುಲಸಚಿವ (ಮೌಲ್ಯಮಾಪನ)ರವರು ಮಾತನಾಡುತ್ತಾ, ವಿಶ್ವವಿದ್ಯಾಲಯದ 35ನೇ ವಾರ್ಷಿಕ ಘಟಿಕೋತ್ಸವದಲ್ಲಿ ಮೂವರು ಗಣ್ಯರಿಗೆ ಗೌರವ ಡಾಕ್ಟರೇಟ್ ಪದವಿಯನ್ನು ಪ್ರದಾನ ಮಾಡಲು ಘನತೆವೆತ್ತ ಕುಲಾಧಿಪತಿಗಳು ಅನುಮೋದನೆ ನೀಡಿದ್ದಾರೆ ಎಂಬ ಮಾಹಿತಿ ನೀಡುತ್ತಾ, ಘಟಿಕೋತ್ಸವದಲ್ಲಿ ಬಂಗಾರದ ಪದಕ, ನಗದು ಬಹುಮಾನ, ಪಿಹೆಚ್.ಡಿ., ಸ್ನಾತಕೋತ್ತರ ಮತ್ತು ಸ್ನಾತಕ ಮುಂತಾದ ಪದವಿಗಳನ್ನು ಪಡೆಯಲು ಅರ್ಹರಾದ ಅಭ್ಯರ್ಥಿಗಳ ಮಾಹಿತಿಯನ್ನು ಸಭೆಗೆ ವಿವರಿಸಿ, ಪಟ್ಟಿಗೆ ಅನುಮೋದನೆ ನೀಡುವಂತೆ ಕೋರಿದರು.

**ನಿರ್ಣಯ:** ಚರ್ಚೆಯ ನಂತರ 35ನೇ ವಾರ್ಷಿಕ ಘಟಿಕೋತ್ಸವದಲ್ಲಿ ಬಂಗಾರದ ಪದಕ, ನಗದು ಬಹುಮಾನ, ಪಿಹೆಚ್.ಡಿ., ಸ್ನಾತಕೋತ್ತರ ಮತ್ತು ಸ್ನಾತಕ ಮುಂತಾದ ಪದವಿಗಳನ್ನು ಪಡೆಯಲು ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಸಭೆಯು ಚರ್ಚೆ ಹಾಗೂ ಪರಿಶೀಲನೆಯ ನಂತರ ಅನುಮೋದಿಸಿತು.

ಅಂತಿಮವಾಗಿ ಸಭೆಗೆ ಆಗಮಿಸಿ ಸೂಕ್ತ ಸಲಹೆ, ಸಹಕಾರ ನೀಡಿದ ಎಲ್ಲಾ ಸದಸ್ಯರುಗಳಿಗೆ ಕುಲಸಚಿವರು ಹೃತ್ಪೂರ್ವಕವಾಗಿ ವಂದಿಸಿದ ನಂತರ ಸಭೆಯ ಕಲಾಪಗಳು ಮುಕ್ತಾಯವಾದವು.

ಕುಲಸಚಿವರು

**ಕುಲಸಚಿವರು**
**ಕುವೆಂಪು ವಿಶ್ವವಿದ್ಯಾನಿಲಯ**
**ಜ್ಞಾನಸಹ್ಯಾದ್ರಿ**
**ಶಂಕರಘಟ್ಟ-577 451**
**ಶಿವಮೊಗ್ಗ ಜಿಲ್ಲೆ**

**ಸಹಿ/--**

**ಕುಲಪತಿಗಳು**